# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೫-೦೭-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
..................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

# ೨೦೨೨ ನೇ ಸಾಲಿನ 'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರಶಸ್ತಿಗೆ ನಾ.ಡಿಸೋಜ ಹಾಗೂ ದು. ಸರಸ್ವತಿ ಆಯ್ಕೆ

ಬೆಂಗಳೂರು: **ಕನ್ನಡ ಸಾಹಿತ್ಯ ಪರಿಷತ್ತು ೨೦೨೩ ನೆಯ ಸಾಲಿನ 'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರಶಸ್ತಿಗಾಗಿ ಹಿರಿಯ ಸಾಹಿತಿ ಶ್ರೀ ನಾ. ಡಿಸೋಜ ಹಾಗೂ ಸಾಮಾಜಿಕ ಹೋರಾಟಗಾರ್ತಿ ದು. ಸರಸ್ವತಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

೨೦೨೩ ನೆಯ ಸಾಲಿನ 'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರಶಸ್ತಿಗಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಪಂಪ ಸಭಾಭವನದಲ್ಲಿ **ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರ ನೇತೃತ್ವದಲ್ಲಿ ನಡೆದ ಆಯ್ಕೆ ಸಮಿತಿಯ ಸಭೆಯಲ್ಲಿ ದತ್ತಿ ದಾನಿಗಳ ಆಶಯದಂತೆ ಪ್ರತಿ ವರ್ಷ ಇಬ್ಬರು ಸಾಧಕರಿಗೆ ಈ ಪ್ರಶಸ್ತಿ ನೀಡಲಾಗುತ್ತಿದ್ದು ಒಬ್ಬರು ಕನ್ನಡ ಕ್ರೈಸ್ತ ಸಾಧಕರಿಗೆ ಮತ್ತು ಇನ್ನೊಬ್ಬರು ಕನ್ನಡ ಜನಪರ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದವರನ್ನು ಆಯ್ಕೆ ಮಾಡಲಾಗುತ್ತದೆ.

ದರಂತೆ ಈ ಬಾರಿಯ **'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರಶಸ್ತಿಗಾಗಿ** ನಾಡಿನ **ಹಿರಿಯ ಕಥೆಗಾರ, ಸಾಹಿತಿಗಳಾಗಿರುವ ಕ್ರೈಸ್ತ ದರ್ಮಕ್ಕೆ ಸೇರಿದ ಶಿವಮೊಗ್ಗ ಜಿಲ್ಲೆಯ ಸಾಗರದ ಶ್ರೀ ನಾ. ಡಿಸೋಜ ಹಾಗೂ ಕನ್ನಡ ಪರ ಹೋರಾಟಗಾರ್ತಿ, ರಂಗಕರ್ಮಿ ಬೆಂಗಳೂರಿನ ಶ್ರೀಮತಿ ದು. ಸರಸ್ವತಿ ಅವರನ್ನು ಆಯ್ಕೆ ಮಾಡಲಾಗಿದೆ. ಈ ಪ್ರಶಸ್ತಿಯು ತಲಾ ೧೦,೦೦೦ (ಹತ್ತು ಸಾವಿರ)ರೂ.ನಗದು,** ಫಲ ತಾಂಬೂಲ ಹಾಗೂ ಸ್ಮರಣಿಕೆಯನ್ನು ಒಳಗೊಂಡಿರುತ್ತದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಮಾಧ್ಯಮಗಳೊಂದಿಗೆ ಮಾತನಾಡಿ, **'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರಶಸ್ತಿಯನ್ನು 'ಸಂಚಲನ ಬಳಗದ'ವರು ೨೦೧೮ರಲ್ಲಿ ಈ ದತ್ತಿ ನಿಧಿ ಸ್ಥಾಪಿಸಿದ್ದು ಇದುವರೆಗೆ ೧೨ ಜನರಿಗೆ ಕನ್ನಡ ಸಾಹಿತ್ಯ ಪರಿಷತ್ತು 'ಫಾದರ್ ಚಸರಾ ಕನ್ನಡ ಸಂಸ್ಕೃತಿ ದತ್ತಿ' ಪ್ರದಾನ ಮಾಡಲಾಗಿದೆ.** ಪ್ರಸ್ತುತ ದತ್ತಿ ಪ್ರಶಸ್ತಿಯನ್ನು ದತ್ತಿ ದಾನಿಗಳು ಆಶಯದಂತೆ ಒಬ್ಬ ಕನ್ನಡ ಕ್ರೈಸ್ತ ಸಾಧಕರಿಗೆ ಹಾಗೂ ಇನ್ನೊಬ್ಬರು ಕನ್ನಡ ಪರ ಹೋರಾಟಗಾರಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ತಮ್ಮ ನಿತ್ಯ ಬದುಕಿನಲ್ಲಿ ಕನ್ನಡ ನಾಡು- ನುಡಿಯ ಕುರಿತು ಅಪಾರ ಗೌರವ ಹೊಂದಿರುವ ಹಿರಿಯ ಸಾಧಕರಿಗೆ ಕನ್ನಡ ಸಾಹಿತ್ಯ ಪರಿಷತ್ತು ಅಭಿನಂದಿಸುತ್ತದೆ. ಪ್ರಶಸ್ತಿ ಪುರಸ್ಕಾರ ಪಡೆದ ಇಬ್ಬರೂ ತಮ್ಮ ಕ್ಷೇತ್ರದಲ್ಲಿ ನಿರಂತರ ಸೇವೆ ಮಾಡುತ್ತಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತು ಪ್ರಶಸ್ತಿ ಪುರಸ್ಕೃತರಿಂದ, ಕನ್ನಡ ನಾಡಿನ ನೆಲಮೂಲ ಸಂಸ್ಕೃತಿಯನ್ನು ಉಳಿಸಿ- ಬೆಳೆಸುವಲ್ಲಿ ನಿರಂತರ ಪ್ರಯತ್ನ ಮುಂದುವರೆಯಲಿದೆ ಎಂದು ವಿಶ್ವಾಸ ವ್ಯಕ್ತ ಪಡಿಸಿದ್ದಾರೆ.

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿಯಲ್ಲಿ ದತ್ತಿ ದಾನಿಗಳಾದ 'ಸಂಚಲನ ಬಳಗದ'ವರ ಪರವಾಗಿ ಶ್ರೀಮತಿ ರೀಟಾ ರೀನಿ ಹಾಗೂ ಶ್ರೀ ರಫಾಯಲ್ ರಾಜ್ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ **ಕಾರ್ಯದರ್ಶಿ ಡಾ. ಪದ್ಮಿನಿ ನಾಗರಾಜು ಹಾಗೂ ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಂ.ಪಟೇಲ್ ಪಾಂಡು** ಅವರು ಉಪಸ್ಥಿತರಿದ್ದರು.

---

ಛಾಯಾಚಿತ್ರ
**ಫೋಟೋ-೧ ಶ್ರೀ. ನಾ. ಡಿಸೋಜ**
**ಫೋಟೋ-೨ ದು. ಸರಸ್ವತಿ**

**ಶ್ರೀನಾಥ್ ಜೆ.**
**ಮಾಧ್ಯಮ ಸಲಹೆಗಾರರು**
**ಕನ್ನಡ ಸಾಹಿತ್ಯ ಪರಿಷತ್ತು**
**ಬೆಂಗಳೂರು**